**ಕರ್ನಾಟಕ ಸರ್ಕಾರ**

ಸಂಖ್ಯೆ: ಮಮಇ 36 ಮಭಾಬ 2018

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ನೆಲಮಹಡಿ, ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 21.02.2018

## ಸುತ್ತೋಲೆ

ವಿಶೇಷ ದತ್ತು ಕೇಂದ್ರಗಳಿಗೆ ದಾಖಲಾಗುತ್ತಿರುವ ಅನಾಥ (Orphan), ಪರಿತ್ಯಕ್ತ (Abandoned) ಹಾಗೂ ಒಪ್ಪಿಸಲ್ಪಟ್ಟ (Surrendered) ಮಕ್ಕಳು ವಿವಿಧ ರೀತಿಯ ಅನಾರೋಗ್ಯ ಕಾರಣಗಳಿಂದ ಮರಣ ಹೊಂದುತ್ತಿದ್ದು, ಇದಕ್ಕಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕಾದ ಅವಶ್ಯಕತೆ ಇರುತ್ತದೆ. ಇಂತಹ ಮಕ್ಕಳು ಜಿಲ್ಲೆಗಳಲ್ಲಿ ದೊರಕಿದಾಗ ಬಹುತೇಕ ಮಕ್ಕಳು ನ್ಯುಮೋನಿಯಾ, ಸೋಂಕು ರೋಗ, ಕಡಿಮೆ ತೂಕ, ಉಸಿರಾಟದ ತೊಂದರೆಗಳಿಂದ ಬಳಲುತ್ತಿದ್ದು, ಚಿಕಿತ್ಸೆ ನೀಡಲು ವೆಂಟಿಲೇಟರ್ ಸೌಲಭ್ಯದ ಅವಶ್ಯಕತೆ ಇದ್ದು, ಆದ್ಯತೆಯ ಮೇರೆಗೆ ಜಿಲ್ಲಾ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲು ಕ್ರಮ ವಹಿಸುವುದು. ಒಂದು ವೇಳೆ ಜಿಲ್ಲಾ ಆಸ್ಪತ್ರೆಗಳಲ್ಲಿ ಸದರಿ ಸೌಲಭ್ಯ ಲಭ್ಯವಾಗದಿದ್ದಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಈ ಸೌಲಭ್ಯವನ್ನು ಉಚಿತವಾಗಿ ಒದಗಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ/ಜಿಲ್ಲಾ ಶಸ್ತ್ರಚಿಕಿತ್ಸಕರುಗಳು ಕ್ರಮ ವಹಿಸಲು ಸೂಚಿಸಿದೆ.

ಮುಂದುವರೆದು, ಮಾರಣಾಂತಿಕ ಹಾಗೂ ಇತರೆ ಖಾಯಿಲೆಗಳಿಂದ ಬಳಲುತ್ತಿರುವ ಇಂತಹ ಮಕ್ಕಳಿಗೆ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ವೈದ್ಯಕೀಯ ಚಿಕಿತ್ಸೆಯನ್ನು ಉಚಿತವಾಗಿ ಒದಗಿಸಲು ಕ್ರಮವಹಿಸುವುದು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ/ವಿಶೇಷ ದತ್ತು ಕೇಂದ್ರಗಳಿಗೆ ಎಲ್ಲಾ ರೀತಿಯ ಸಹಕಾರ ನೀಡಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ/ಜಿಲ್ಲಾ ಶಸ್ತ್ರಚಿಕಿತ್ಸಕರುಗಳಿಗೆ ಈ ಮೂಲಕ ಸೂಚಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ

(ಅಜಯ್ ಸೇಠ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ :

(1) ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
(2) ಎಲ್ಲಾ ಜಿಲ್ಲೆಗಳ ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ
(3) ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
(4) ಎಲ್ಲಾ ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು.
(5) ಮುಖ್ಯಸ್ಥರು, ವಿಶೇಷ ದತ್ತು ಕೇಂದ್ರಗಳು.